ಜೆಎಸ್‌ಎಸ್ ಮಹಾವಿದ್ಯಾಪೀಠ
ಜಗದ್ಗುರು ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಜ್ಞಾನವಾರಿಧಿ–49

## ಡಿಜಿಟಲ್ ಸಾಪ್ತಾಹಿಕ ಉಪನ್ಯಾಸ ಕಾರ್ಯಕ್ರಮ

**8 ನವೆಂಬರ್ 2021 * ಸೋಮವಾರ * ಸಂಜೆ 6.00**

ದಿವ್ಯ ಸಾನ್ನಿಧ್ಯ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ
ಸುತ್ತೂರು ಶ್ರೀಕ್ಷೇತ್ರ

ಉಪನ್ಯಾಸ



**ಶ್ರೀ ಎಂ. ನಿಶ್ಚಯ್ ಪ್ರಸಾದ್**
ಕೇಂದ್ರ ಲೋಕಸೇವಾ ಆಯೋಗದ
ನಾಗರಿಕ ಸೇವೆ ಪರೀಕ್ಷೆಯಲ್ಲಿ 130ನೇ ರ್‍ಯಾಂಕ್ ಪಡೆದವರು
ಎಸ್‌ಜೆಸಿಇ ಹಿರಿಯ ವಿದ್ಯಾರ್ಥಿ

ವಿಷಯ : ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪೂರ್ವಸಿದ್ಧತೆ

(ಉಪನ್ಯಾಸದ ನಂತರ ಆನ್‌ಲೈನ್‌ನಲ್ಲಿ ಬರುವ ಪ್ರಶ್ನೆಗಳಲ್ಲಿ ಆಯ್ದವುಗಳಿಗೆ ಉತ್ತರಿಸಲಾಗುವುದು)

ಆನ್‌ಲೈನ್ ಮೂಲಕ ನೇರವಾಗಿ ವೀಕ್ಷಿಸಲು ಹಾರ್ದಿಕ ಸ್ವಾಗತ

LIVE STREAMING

YouTube http://Youtube.com/c/JSSMahavidyapeethaonline

https://www.facebook.com/JSSMVP

**ಜ್ಞಾನವಾರಿಧಿ** ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮವನ್ನು 2020ರ ಡಿಸೆಂಬರ್ ತಿಂಗಳಿನಿಂದ ಪ್ರತಿ ಸೋಮವಾರ ಏರ್ಪಡಿಸಿಕೊಂಡು ಬರಲಾಗುತ್ತಿದೆ. ಧರ್ಮ, ಅಧ್ಯಾತ್ಮ, ಯೋಗ, ಕಲೆ, ಸಾಹಿತ್ಯ, ಸಂಸ್ಕೃತಿ, ಆರೋಗ್ಯ, ಜೀವನಶೈಲಿ, ವಿಜ್ಞಾನ, ತಂತ್ರಜ್ಞಾನ ಮುಂತಾದ ವಿಷಯಗಳು ಮತ್ತು ಪ್ರಚಲಿತ ವಿದ್ಯಮಾನಗಳನ್ನು ಕುರಿತು ದೇಶ ಮತ್ತು ವಿದೇಶದ ವಿವಿಧ ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸಗಳನ್ನು ಆಯೋಜಿಸಲಾಗುತ್ತಿದೆ.

**ಶ್ರೀ ಎಂ. ನಿಶ್ಚಯ್ ಪ್ರಸಾದ್‌ರವರ** ಜನ್ಮಸ್ಥಳ ಮೈಸೂರು. ಗುತ್ತಿಗೆದಾರರಾದ ಶ್ರೀ ಕೆ.ಎಂ. ಪ್ರಸಾದ್ ಹಾಗೂ ಆಯುರ್ವೇದ ವೈದ್ಯರಾದ ಡಾ. ಗಾಯತ್ರಿ ದಂಪತಿಗಳ ಸುಪುತ್ರರು. ಮೈಸೂರಿನ ಐಡಿಯಲ್ ಜಾವಾ ರೋಟರಿ ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣ, ಮರಿಮಲ್ಲಪ್ಪ ಶಾಲೆ ಮತ್ತು ಕಾಲೇಜಿನಲ್ಲಿ ಪ್ರೌಢ ಮತ್ತು ಪದವಿಪೂರ್ವ ಶಿಕ್ಷಣ ಪೂರೈಸಿದರು. ನಂತರ ಶ್ರೀ ಜಯಚಾಮರಾಜೇಂದ್ರ ಇಂಜಿನಿಯರಿಂಗ್ ಕಾಲೇಜಿನಲ್ಲಿ ಬಯೋಟೆಕ್ನಾಲಜಿ ವಿಷಯದಲ್ಲಿ ಬಿಇ ಪದವಿ ಪಡೆದರು.

ಎಸ್‌ಎಸ್‌ಎಲ್‌ಸಿಯಲ್ಲಿ 625ಕ್ಕೆ 621 ಅಂಕ ಹಾಗೂ ದ್ವಿತೀಯ ಪಿಯುಸಿಯಲ್ಲಿ 600ಕ್ಕೆ 590 ಅಂಕದೊಂದಿಗೆ ರಾಜ್ಯಮಟ್ಟದಲ್ಲಿ ರ‍್ಯಾಂಕ್ ಗಳಿಸಿದ್ದಾರೆ. ಪ್ರಸ್ತುತ ಕೇಂದ್ರ ಲೋಕಸೇವಾ ಆಯೋಗದ ನಾಗರಿಕ ಸೇವೆ ಪರೀಕ್ಷೆಯ ಎರಡನೇ ಪ್ರಯತ್ನದಲ್ಲಿ 130ನೇ ರ‍್ಯಾಂಕ್ ಪಡೆದಿರುವ ಇವರು ಯಾವುದೇ ತರಬೇತಿಯನ್ನು ಪಡೆಯದೇ ಸ್ವಂತ ಶ್ರಮದಿಂದ ಅಧ್ಯಯನ ಮಾಡಿ ಉತ್ತಮ ಸ್ಥಾನ ಗಳಿಸಿದ ಯುವ ಪ್ರತಿಭಾನ್ವಿತರು. ಉತ್ತಮ ಸಮಾಜದ ನಿರ್ಮಾಣಕ್ಕಾಗಿ ಅತ್ಯಂತ ಬದ್ಧತೆಯಿಂದ ಕಾರ್ಯನಿರ್ವಹಿಸುವ ಕನಸು ಹೊಂದಿದ್ದಾರೆ.

**ಜ್ಞಾನವಾರಿಧಿ–50 * 15 ನವೆಂಬರ್ 2021**

**ಕನ್ನಡ ಪೂಜಾರಿ ಶ್ರೀ ಹಿರೇಮಗಳೂರು ಕಣ್ಣನ್**

ಪ್ರಖ್ಯಾತ ವಾಗ್ಮಿಗಳು
ಚಿಕ್ಕಮಗಳೂರು

ವಿಷಯ : ಧಾರ್ಮಿಕ ಆಚಾರ ಜೀವಕ್ಕೆ ಸಂಸ್ಕಾರ

**ಜ್ಞಾನವಾರಿಧಿ–51 * 22 ನವೆಂಬರ್ 2021**

**ಪ್ರೊ. ಪ್ರೇಮಶೇಖರ**

ಖ್ಯಾತ ಅಂಕಣಕಾರರು, ವಿಜಯವಾಣಿ
ನವದೆಹಲಿ

ವಿಷಯ : ಮನಸ್ಸು ಒಂದು ಮಹಾಶಕ್ತಿ